# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1207 |
| 2. | ಸದಸ್ಯರ ಹೆಸರು | : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮ ನಿರ್ದೇಶನ ಹೊಂದಿದವರು) |
| 3. | ಉತ್ತರಿಸಬೇಕಾದ ದಿನಾಂಕ | : 29.12.2022 |
| 4. | ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಗಳು |

| ಕ್ರ ಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರದ ಅನುಕಂಪದ ಆಧಾರದ ಮೇಲೆ ನೇಮಕಾತಿಗಾಗಿ ಕೆ.ಸಿ.ಎಸ್.ಆರ್ ನಿಯಮಾವಳಿಗಳಂತೆ ಯಾವ ಯಾವ ದಾಖಲೆಗಳನ್ನು ಒದಗಿಸಬೇಕು : ಮತ್ತು ಯಾರಿಂದ ಪಡೆದು ಒದಗಿಸಬೇಕು: ಎಷ್ಟು ಬಾರಿ ದಾಖಲೆಗಳನ್ನು ಒದಗಿಸಬೇಕು: (ಚೆಕ್ ಲಿಸ್ಟ್ ನೊಂದಿಗೆ ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996 ರನ್ವಯ ರಾಜ್ಯ ಸರ್ಕಾರಿ ನೌಕರನು ಸೇವೆಯಲ್ಲಿರುವಾಗಲೇ ಮೃತಪಟ್ಟಲ್ಲಿ ಆತನ ಅವಲಂಬಿತರಲ್ಲಿ ಒಬ್ಬರಿಗೆ ಅರ್ಹತೆಯ ಆಧಾರದ ಮೇಲೆ ಅನುಕಂಪದ ಆಧಾರದ ನೇಮಕಾತಿಯನ್ನು ನೀಡಲು ಅವಕಾಶವನ್ನು ಕಲ್ಪಿಸಲಾಗಿದೆ. ಸದರಿ ನಿಯಮಗಳಲ್ಲಿ ಅನುಕಂಪದ ನೇಮಕಾತಿಯನ್ನು ಹೊಂದಲು ಕೆಲವು ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಲಾಗಿದೆ. ನೇಮಕಾತಿ ಪ್ರಾಧಿಕಾರವು ಅನುಕಂಪದ ನೇಮಕಾತಿ ನೀಡುವ ಸಂದರ್ಭದಲ್ಲಿ 1996ರ ನಿಯಮಗಳಲ್ಲಿ ವಿಧಿಸಿರುವ ಷರತ್ತು/ನಿಬಂಧನೆಗಳನ್ನು ಪೂರೈಸಲು ಅಗತ್ಯವಾದ ದಾಖಲೆಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಬೇಕಾಗಿರುತ್ತದೆ. ಪ್ರತ್ಯೇಕ ಪ್ರಕರಣಗಳಲ್ಲಿ ದಾಖಲೆಗಳ ಅಗತ್ಯತೆಯು ಭಿನ್ನವಾಗಿರುತ್ತದೆ. ಈ ಹಿನ್ನಲೆಯಲ್ಲಿ ನೇಮಕಾತಿ ಪ್ರಾಧಿಕಾರವು ಪ್ರಕರಣಗಳಿಗೆ ಅನುಸಾರವಾಗಿ ದಾಖಲೆಗಳನ್ನು ಪಡೆದುಕೊಳ್ಳಬೇಕಾಗುತ್ತದೆ. |
| (ಆ) | ಸರ್ಕಾರದ ಅನುಕಂಪದ ಆಧಾರದ ಮೇಲೆ ನೇಮಕಾತಿಗಾಗಿ ಕೆಲವು ಇಲಾಖೆಗಳು ವಿವಿಧ ರೀತಿಯ ದಾಖಲೆಗಳನ್ನು ಒದಗಿಸಲು ಸೂಚಿಸುತ್ತಿದ್ದು, (ಉದಾ:- ಗೃಹ ಇಲಾಖೆಯ ಅನುಕಂಪದ ಆಧಾರದ ನೇಮಕಾತಿಗೆ ಜಾರಿ ನಿರ್ದೇಶನಾಲಯದಿಂದ ಪರಿಶೀಲನಾ ವರದಿಯನ್ನು ಪಡೆದು ನೇಮಕಾತಿ ಮಾಡಲು ಸೂಚಿಸಿರುತ್ತಾರೆ) ಕೆ.ಸಿ.ಎಸ್.ಆರ್ ನಿಯಮಗಳಂತೆ ದಾಖಲೆಗಳನ್ನು ಪಡೆದು ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದವರಿಗೆ ಯಾವ ದಾಖಲೆಗಳನ್ನು ಯಾರಿಂದ ಪಡೆದು ಸಲ್ಲಿಸಬೇಕೆಂದು ಸರ್ಕಾರದ ಆದೇಶಗಳಿವೆ: (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996ರನ್ವಯ ಅನುಕಂಪದ ಆಧಾರದ ನೇಮಕಾತಿಗಾಗಿ ಅಗತ್ಯವಾದ ದಾಖಲೆಗಳನ್ನು ನೇಮಕಾತಿ ಪ್ರಾಧಿಕಾರವು ಅರ್ಜಿದಾರರಿಂದ ಪಡೆದುಕೊಳ್ಳಬೇಕಾಗಿರುತ್ತದೆ. ಯಾವ ದಾಖಲೆಗಳನ್ನು ಯಾರಿಂದ ಪಡೆದು ಸಲ್ಲಿಸಬೇಕೆಂಬ ಬಗ್ಗೆ ನಿಯಮಗಳಲ್ಲಿ ನಿರ್ದಿಷ್ಟಪಡಿಸಲಾಗಿರುವುದಿಲ್ಲ.<br><br>ಅನುಕಂಪ ಆಧಾರದ ನೇಮಕಾತಿಗೆ ಜಾರಿ ನಿರ್ದೇಶನಾಲಯದಿಂದ ಪರಿಶೀಲನಾ ವರದಿಯನ್ನು ಪಡೆದು ಸಲ್ಲಿಸುವಂತೆ ಸೂಚಿಸಿರುವ ಬಗ್ಗೆ ಪರಿಶೀಲಿಸಲಾಗುವುದೆಂದು ಒಳಾಡಳಿತ ಇಲಾಖೆಯು ತಿಳಿಸಿರುತ್ತದೆ. |

| | | |
|---|---|---|
| ಇ) | ಸರ್ಕಾರದ ಅನುಕಂಪದ ಆಧಾರದ ಮೇಲೆ ನೇಮಕಾತಿಗಳು ತುಂಬಾ ವಿಳಂಬವಾಗುತ್ತಿದ್ದು, ಕೆ.ಸಿ.ಎಸ್.ಆರ್ ನಿಯಮಾವಳಿಗಳಂತೆ ಮೂರು ತಿಂಗಳೊಳಗಾಗಿ ನೇಮಕಾತಿ ಮಾಡದಿದ್ದಲ್ಲಿ ಪರಿಹಾರ ನೀಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ: ಕೆ.ಸಿ.ಎಸ್.ಆರ್ ನಿಯಮಗಳಂತೆ ಮೂರು ತಿಂಗಳ ವಿಳಂಬವಾದ ಪ್ರಕರಣಗಳಿಗೆ ಪರಿಹಾರ ನೀಡುವಂತೆ ಮಾನ್ಯ ನ್ಯಾಯಾಲಯಗಳಿಂದ ಆದೇಶಗಳು ಹೊರಡಿಸಲಾಗಿದೆಯೇ: ಆದೇಶಗಳನ್ನು ಹೊರಡಿಸಿದ್ದಲ್ಲಿ: (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996 ರ ನಿಯಮ 6 ಉಪ ನಿಯಮ 2ರಲ್ಲಿ ನಿಗದಿತ ಅವಧಿಯೊಳಗೆ ಸಲ್ಲಿಸಲಾದ ಅರ್ಜಿ ಸ್ವೀಕೃತವಾದ ನಂತರ ಸಾಧ್ಯವಾದಷ್ಟು ಮೂರು ತಿಂಗಳೊಳಗಾಗಿ ಅನುಕಂಪದ ಆಧಾರದ ನೇಮಕಾತಿ ನೀಡುವಂತೆ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ. ಆದರೆ ಕೆಲವು ಸಂದರ್ಭಗಳಲ್ಲಿ 1996 ರ ನಿಯಮಗಳಲ್ಲಿ ವಿಧಿಸಿರುವ ಷರತ್ತು/ ನಿಬಂಧನೆಗಳನ್ನು ಪೂರೈಸಲು ಅಗತ್ಯವಿರುವ ದಾಖಲೆಗಳನ್ನು ನೇಮಕಾತಿ ಪ್ರಾಧಿಕಾರಗಳು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಕೂಲಂಕಷವಾಗಿ ಪರಿಶೀಲಿಸಿ ಅನುಕಂಪದ ನೇಮಕಾತಿ ನೀಡಲು ಸಾಕಷ್ಟು ಕಾಲಾವಕಾಶದ ಅಗತ್ಯವಿರುತ್ತದೆ. ಮೂರು ತಿಂಗಳಿಗಿಂತ ವಿಳಂಬವಾದ ಪ್ರಕರಣಗಳಿಗೆ ಪರಿಹಾರ ನೀಡುವಂತೆ ಮಾನ್ಯ ನ್ಯಾಯಾಲಯಗಳಿಂದ ಆದೇಶ ಹೊರಡಿಸಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಈ) | ಸರ್ಕಾರದ ಅನುಕಂಪದ ಆಧಾರದ ಮೇಲೆ ನೇಮಕಾತಿಗಳು ಕೆ.ಸಿ.ಎಸ್.ಆರ್ ನಿಯಮಗಳಂತೆ ವಿಳಂಬ ಮಾಡದೇ ಕಾಲ ಮಿತಿಯೊಳಗೆ ನೇಮಕಾತಿಗಳನ್ನು ಮಾಡಲು ಸರ್ಕಾರವು ಎಲ್ಲಾ ಇಲಾಖೆಗಳಿಗೆ ಕ್ರಮ ಕೈಗೊಳ್ಳಲು ನಿರ್ದೇಶನ/ ಆದೇಶವನ್ನು ನೀಡಲಾಗುವುದೇ? (ಸಂಪೂರ್ಣ ವಿವರ ನೀಡುವುದು) | ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ನೇಮಕಾತಿ) ನಿಯಮಗಳು 1996 ರ ನಿಯಮ 6 ಉಪ ನಿಯಮ 2ರಲ್ಲಿ ನಿಗದಿತ ಅವಧಿಯೊಳಗೆ ಸಲ್ಲಿಸಲಾದ ಅರ್ಜಿ ಸ್ವೀಕೃತವಾದ ನಂತರ ಸಾಧ್ಯವಾದಷ್ಟು ಮೂರು ತಿಂಗಳೊಳಗಾಗಿ ಅನುಕಂಪದ ಆಧಾರದ ನೇಮಕಾತಿ ನೀಡುವಂತೆ ನೇಮಕಾತಿ ಪ್ರಾಧಿಕಾರಗಳಿಗೆ ಸೂಚಿಸಲಾಗಿದೆ. ಮುಂದುವರೆದು, ಅನುಕಂಪದ ಆಧಾರ ಮೇಲೆ ನೇಮಕಾತಿಗಳಲ್ಲಿ ವಿಳಂಬವಾಗುತ್ತಿರುವುದನ್ನು ಗಮನಿಸಿ ಅಂತಹ ವಿಳಂಬವನ್ನು ತಡೆಗಟ್ಟುವ ನಿಟ್ಟಿನಲ್ಲಿ ಕರ್ನಾಟಕ ಸಿವಿಲ್ ಸೇವಾ (ಅನುಕಂಪದ ಆಧಾರದ ಮೇಲೆ ನೇಮಕಾತಿ) ನಿಯಮಗಳು 1996ರ ನಿಯಮಗಳಿಗೆ ಅಧಿಸೂಚನೆ ಸಂಖ್ಯೆ: ಸಿಆಸುಇ 26 ಸೇಅನೇ 2018 ದಿನಾಂಕ: 09.04.2021ರಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಿ, ನಿಯಮಗಳನ್ನು ಸರಳೀಕರಣಗೊಳಿಸಲಾಗಿದೆ. |

ಸಂಖ್ಯೆ: ಸಿಆಸುಇ 52 ಸೇಅನೇ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ